ಸಮಗ್ರ ಶಿಕ್ಷಣ – ಕರ್ನಾಟಕ

ರಾಜ್ಯ ಯೋಜನಾ ನಿರ್ದೇಶಕರ ಕಛೇರಿ, ಹೊಸ ಸಾರ್ವಜನಿಕ
ಕಟ್ಟಡಗಳ ಪೂರಕ ಕಟ್ಟಡ, ನೃಪತುಂಗ ರಸ್ತೆ, ಬೆಂಗಳೂರು–560 001.

ಸಂಖ್ಯೆ: SSA/QMT/KPS/Fund/2018-19 ದಿನಾಂಕ:25–09–2018

ಸುತ್ತೋಲೆ

ವಿಷಯ: Karnataka Public schools (KPS) ಗಳಿಗೆ ಮೂಲಭೂತ ಸೌಕರ್ಯ ಹಾಗೂ ವಾರ್ಷಿಕ ನಿರ್ವಹಣೆಗಾಗಿ ಅನುದಾನ ಬಿಡುಗಡೆ ಮಾಡುತ್ತಿರುವ ಬಗ್ಗೆ.

ಉಲ್ಲೇಖ: ಸರ್ಕಾರಿ ಆದೇಶ ಸಂಖ್ಯೆ:ಇಡಿ 04 ಯೋಸಕ 2018, ದಿನಾಂಕ:05–01–2018, 29–05–2018, 05–06–2018.

****

ಉಲ್ಲೇಖಿತ ದಿನಾಂಕ:05–01–2018 ರ ಸರ್ಕಾರಿ ಆದೇಶದಲ್ಲಿ 01ನೇ ತರಗತಿಯಿಂದ 12ನೇ ತರಗತಿಯವರಗೆ ಒಂದೇ ಆವರಣದಲ್ಲಿ ಇರುವ ಶಾಲೆಗಳನ್ನು, ಪ್ರತಿ ತಾಲ್ಲೂಕಿಗೆ 01 ರಂತೆ ಒಟ್ಟು 176 ಸರ್ಕಾರಿ ಶಾಲೆಗಳನ್ನು Karnataka Public School (KPS) ಎಂದು ಪದನಾಮೀಕರಿಸಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

2018–19ನೇ ಸಾಲಿನಲ್ಲಿ ಸದರಿ ಶಾಲೆಗಳಿಗೆ ದುರಸ್ತಿ ಮತ್ತು ಮೂಲಭೂತ ಸೌಕರ್ಯ, ಶಾಲಾ ಕಟ್ಟಡ ನಿರ್ವಹಣೆ ಹಾಗೂ ಮತ್ತಿತರ ಸೌಲಭ್ಯಗಳನ್ನು ಒದಗಿಸುವ ಉದ್ದೇಶದಿಂದ 864 ಕೊಠಡಿಗಳಿಗೆ ರೂ.864.00 ಲಕ್ಷಗಳು ಹಾಗೂ 176 KPS ಶಾಲೆಗಳ ವಾರ್ಷಿಕ ನಿರ್ವಹಣೆಗಾಗಿ ರೂ.880.00 ಲಕ್ಷಗಳು ಸೇರಿ ಒಟ್ಟು ರೂ.1744.00 ಲಕ್ಷಗಳನ್ನು ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರು (ಆಡಳಿತ) ಇವರಿಗೆ ಅನುಬಂಧದಲ್ಲಿ ತಿಳಿಸಿರುವಂತೆ ಬಿಡುಗಡೆ ಮಾಡಿದೆ.

ಜಿಲ್ಲಾ ಉಪನಿರ್ದೇಶಕರು (ಆಡಳಿತ) ಇವರು 07 ದಿನದೊಳಗಾಗಿ ಸಂಬಂಧಿಸಿದ ಶಾಲೆಗಳ ಖಾತೆಗೆ ಜಮಾ ಮಾಡಿ ಈ ಕಛೇರಿಗೆ ವರದಿ ನೀಡುವುದು. ಸದರಿ ಅನುದಾನದ ವೆಚ್ಚವನ್ನು ಭರಿಸುವ ಸಂಬಂಧ ಸವಿವರವಾದ ಮಾರ್ಗಸೂಚಿಯನ್ನು ನೀಡಲಾಗುವುದು.

ಅನುಮೋದಿತ ಬಿಡುಗಡೆಯ ವಿವರಗಳು ಈ ಕೆಳಕಂಡಂತಿದೆ.

ಕ್ರ ಸಂ	ವಿವರ	ಅನುಮೋದಿತ ಮೊತ್ತ ರೂ.ಲಕ್ಷಗಳಲ್ಲಿ	ಷರಾ
01	ದುರಸ್ತಿ ಮತ್ತು ಮೂಲಭೂತ ಸೌಕರ್ಯ	01.00	ಶಾಲೆಗಳಲ್ಲಿ ದುರಸ್ತಿಯಾಗಬೇಕಾಗಿರುವ ಕೊಠಡಿಗಳ ಸಂಖ್ಯೆಗೆ ಅನುಗುಣವಾಗಿ – ಪ್ರತಿ ಕೊಠಡಿಗೆ
02	ವಾರ್ಷಿಕ ನಿರ್ವಹಣೆ	05.00	ಪ್ರತಿ ಶಾಲೆಗೆ.

ಲಗತ್ತುಗಳು:

1. ಅನುಬಂಧ – 1 : ಶಾಲಾವಾರು ದುರಸ್ತಿ ಮತ್ತು ಮೂಲಭೂತ ಸೌಕರ್ಯ ಒದಗಿಸಲು ಅನುದಾನ ವಿವರದ ಪಟ್ಟಿ.
2. ಅನುಬಂಧ – 2 : ಶಾಲಾವಾರು ವಾರ್ಷಿಕ ನಿರ್ವಹಣ ಅನುದಾನ ವಿವರದ ಪಟ್ಟಿ.
3. ಅನುಬಂಧ – 3 : ಜಿಲ್ಲಾವಾರು ದುರಸ್ತಿ ಮತ್ತು ಮೂಲಭೂತ ಸೌಕರ್ಯ ಹಾಗೂ ವಾರ್ಷಿಕ ನಿರ್ವಹಣೆಗೆ ಬಿಡುಗಡೆ ಮಾಡಲಾದ ಕ್ರೋಢೀಕೃತ ಅನುದಾನದ ಪಟ್ಟಿ.
4. ಅನುಬಂಧ – 4 : ಮಂಜೂರಾಗಿರುವ ಶಾಲೆಯ ಬದಲು ಮತ್ತೊಂದು ಶಾಲೆಯನ್ನು ಸೇರ್ಪಡೆ ಮಾಡಿರುವ ತಿದ್ದುಪಡಿ ಆದೇಶ.

ರಾಜ್ಯ ಯೋಜನಾ ನಿರ್ದೇಶಕರು
ಸಮಗ್ರ ಶಿಕ್ಷಣ, ಬೆಂಗಳೂರು.

ಗೆ,

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) ಇವರಿಗೆ ಅಗತ್ಯ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಜಿಲ್ಲಾ ಯೋಜನಾ ಉಪಸಮನ್ವಯಾಧಿಕಾರಿಗಳು, ಆರ್.ಎಂ.ಎಸ್.ಎ ಇವರಿಗೆ ಅಗತ್ಯ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ತಾಲ್ಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರು (ಆಡಳಿತ) ಇವರ ಮುಖಾಂತರ.
4. ರಾಜ್ಯದ ಎಲ್ಲಾ ತಾಲ್ಲೂಕಿನ ಕ್ಷೇತ್ರ ಸಮನ್ವಯಾಧಿಕಾರಿಗಳಿಗೆ ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರು (ಆಡಳಿತ) ಇವರ ಮುಖಾಂತರ.
5. ಸಂಬಂಧಿಸಿದ ಶಾಲಾ ಮುಖ್ಯಸ್ಥರಿಗೆ ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರು (ಆಡಳಿತ) ಇವರ ಮುಖಾಂತರ.

ಪ್ರತಿಯನ್ನು:

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆ ಇವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
3. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಮತ್ತು ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರಿಗೆ ಅಗತ್ಯ ಸೂಚನೆ ನೀಡಲು ಕೋರಿ.
4. ಅಪರ ಆಯುಕ್ತರು, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ಮತ್ತು ಕಲ್ಬುರ್ಗಿ ವಿಭಾಗ.
5. ನಿರ್ದೇಶಕರು (ಪ್ರೌಢಶಿಕ್ಷಣ), ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ಮಾಹಿತಿಗಾಗಿ.
6. ನಿರ್ದೇಶಕರು (ಪ್ರಾಥಮಿಕ ಶಿಕ್ಷಣ), ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ ಇವರಿಗೆ ಮಾಹಿತಿಗಾಗಿ.
7. ಕಛೇರಿ ಪ್ರತಿ.